All India Radio: Bangalore
National Bulletin In Kannada
24.10.2025 7.35 a.m.
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

24.10.2025 7.35 a.m.

< > < > < > < >

ಮುಖ್ಯಾಂಶಗಳು

೧. ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದಲ್ಲಿಂದು ೧೭ನೇ ರೋಜ್‌ಗಾರ್ ಮೇಳ; ೫೧ ಸಾವಿರಕ್ಕೂ ಹೆಚ್ಚು ನೇಮಕಾತಿ ಪತ್ರ ವಿತರಣೆ

೨. ನವದೆಹಲಿಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಂದ ರಕ್ಷಣಾ ಸಾಮಗ್ರಿ ಖರೀದಿ ಕೈಪಿಡಿ ಬಿಡುಗಡೆ

೩. ನವೆಂಬರ್ ೩ ರಿಂದ ೫ ರವರೆಗೆ ನವದೆಹಲಿಯ ಭಾರತ್ ಮಂಟಪದಲ್ಲಿ ಎಸ್ಟಿಕ್ ೨೦೨೫ ಸಮಾವೇಶ ಆಯೋಜನೆ

೪. ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್; ನ್ಯೂಜಿಲ್ಯಾಂಡ್ ವಿರುದ್ಧ ೫೩ ರನ್ ಜಯದೊಂದಿಗೆ ಸೆಮಿಫೈನಲ್‌ಗೆ ಲಗ್ಗೆಯಿಟ್ಟ ಭಾರತ

><><><><><

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಂದು ರೋಜ್‌ಗಾರ್ ಮೇಳದಡಿಯಲ್ಲಿ ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಯುವಕರಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ೫೧ ಸಾವಿರಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಈ ಕಾರ್ಯಕ್ರಮದ

ಸಂದರ್ಭದಲ್ಲಿ ಪ್ರಧಾನಿ ಹೊಸದಾಗಿ ನೇಮಕಗೊಂಡ ಅಭ್ಯರ್ಥಿಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ಈ ೧೭ ನೇ ರೋಜ್‌ಗಾರ್ ಮೇಳದಲ್ಲಿ ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಮತ್ತು ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ರಾಜ್ಯ ಸಚಿವ ಅಜಯ್ ತಮ್ತಾ ಭಾಗವಹಿಸಲಿದ್ದಾರೆ. ಉದ್ಯೋಗ ಸೃಷ್ಟಿಗೆ ಹೆಚ್ಚಿನ ಆದ್ಯತೆ ನೀಡುವ ಪ್ರಧಾನಿಯವರ ಬದ್ಧತೆಯ ಅನುಗುಣವಾಗಿ ರೋಜ್‌ಗಾರ್ ಮೇಳ ಒಂದು ಪ್ರಮುಖ ಹೆಜ್ಜೆಯಾಗಿದೆ. ಯುವಕರ ಸಬಲೀಕರಣ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಅವರ ಭಾಗವಹಿಸುವಿಕೆಗಾಗಿ ಸೂಕ್ತ ಅವಕಾಶಗಳನ್ನು ಒದಗಿಸುವಲ್ಲಿ ಇದು ಮಹತ್ವದ ಪಾತ್ರ ವಹಿಸುತ್ತದೆ. ಮೇಳದ ಭಾಗವಾಗಿ ತಮಿಳುನಾಡಿನಲ್ಲಿ, ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಚೆನ್ನೈನಲ್ಲಿ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಆಯುಷ್ ಮತ್ತು ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವ ಪ್ರತಾಪ್‌ರಾವ್ ಜಾಧವ್ ಅವರು ಮಧುರೈನಲ್ಲಿ, ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ತಿರುಚಿರಾಪಳ್ಳಿಯಲ್ಲಿ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಬೆಂಗಳೂರಿನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಕೇಂದ್ರ ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

><><><><

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿ ನಿನ್ನೆ ರಕ್ಷಣಾ ಸಾಮಗ್ರಿ ಖರೀದಿ ಕೈಪಿಡಿಯನ್ನು ಬಿಡುಗಡೆ ಮಾಡಿದರು. ಇದರನ್ವಯ ರಕ್ಷಣಾ ಸಚಿವಾಲಯದಡಿ ಬರುವ ಮೂರು ಪಡೆಗಳು ಹಾಗೂ ಸಂಸ್ಥೆಗಳು ೧ ಲಕ್ಷ ಕೋಟಿ ರೂಪಾಯಿವರೆಗಿನ ರಕ್ಷಣಾ ಸಾಮಗ್ರಿಗಳನ್ನು ಖರೀದಿಸಬಹುದಾಗಿದೆ. ಹೊಸ ಕೈಪಿಡಿಯ ಖರೀದಿ ನಿರ್ದೇಶನಗಳು ಮುಂದಿನ ತಿಂಗಳ ೧ ರಂದು ಜಾರಿಗೆ ಬರಲಿವೆ. ಕೈಪಿಡಿಯ ಪರಿಷ್ಕರಣೆಗಾಗಿ ತಮ್ಮ ಸಚಿವಾಲಯ ಮತ್ತು ಪ್ರಧಾನ ಕಚೇರಿಯ ರಕ್ಷಣಾ ಸಿಬ್ಬಂದಿಯ

ಪ್ರಯತ್ನಗಳನ್ನು ಶ್ಲಾಘಿಸಿದ ಸಚಿವರು, ಹೊಸ ಕೈಪಿಡಿಯು ಕಾರ್ಯವಿಧಾನಗಳನ್ನು ಸರಳಗೊಳಿಸುತ್ತದೆ ಮತ್ತು ಕಾರ್ಯನಿರ್ವಹಣೆಯಲ್ಲಿ ಏಕರೂಪತೆಯನ್ನು ತರುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕಾರ್ಯಾಚರಣೆಯ ಸಿದ್ಧತೆಗಾಗಿ ಸಶಸ್ತ್ರ ಪಡೆಗಳಿಗೆ ಅಗತ್ಯವಿರುವ ಸರಕು ಮತ್ತು ಸೇವೆಗಳನ್ನು ಒದಗಿಸುವಲ್ಲಿಯೂ ಇದು ಸಹಾಯಕವಾಗಿರುತ್ತದೆ. ಇದು ರಕ್ಷಣಾ ಉತ್ಪಾದನೆ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಸಣ್ಣ, ಅತಿಸಣ್ಣ ಮತ್ತು ಮಧ್ಯಮ ಉದ್ಯಮಗಳು ಮತ್ತು ನವೋದ್ಯಮಗಳಿಗೆ ಹೆಚ್ಚಿನ ಅವಕಾಶಗಳನ್ನು ಒದಗಿಸುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ, ಸೇನಾಪಡೆ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಮತ್ತು ರಕ್ಷಣಾ ಕಾರ್ಯದರ್ಶಿ ಭಾಗವಹಿಸಿದ್ದರು.

><><><><

ಉದಯೋನ್ಮುಖ ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತಾ ಸಮಾವೇಶ ಎಸ್ಟಿಕ್ ೨೦೨೫ ಅನ್ನು ನವೆಂಬರ್ ೩ ರಿಂದ ೫ ರವರೆಗೆ ನವದೆಹಲಿಯ ಭಾರತ್ ಮಂಟಪದಲ್ಲಿ ಆಯೋಜಿಸಲಾಗಿದೆ. ಈ ನಿಟ್ಟಿನಲ್ಲಿ, ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ನವದೆಹಲಿಯಲ್ಲಿ ಪೂರ್ವಭಾವಿ ಕಾರ್ಯಕ್ರಮವನ್ನು ಆಯೋಜಿಸಿತ್ತು. ನಿನ್ನೆ ನಡೆದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಸಚಿವಾಲಯದ ಕಾರ್ಯದರ್ಶಿ ಎಸ್ ಕೃಷ್ಣನ್, ಭಾರತ ಸಾಮಾಜಿಕ ಒಳಿತಿಗಾಗಿ ಕೃತಕ ಬುದ್ಧಿಮತ್ತೆಯನ್ನು ಒಂದು ಶಕ್ತಿಯಾಗಿ ಬಳಸಿಕೊಳ್ಳಬೇಕು. ಭಾರತ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಬೇಕಾದರೆ, ತಂತ್ರಜ್ಞಾನದ ಅಲೆಗೆ ಅನುಗುಣವಾಗಿ ಮುನ್ನಡೆಯಬೇಕು ಮತ್ತು ಎಐ ಈ ಪರಿವರ್ತನೆಗೆ ಚಾಲನೆ ನೀಡುವ ಅತ್ಯಂತ ನಿರ್ಣಾಯಕ ತಂತ್ರಜ್ಞಾನವಾಗಿದೆ ಎಂದು ತಿಳಿಸಿದರು. ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ಈ ಸಮಾವೇಶವನ್ನು ಆಯೋಜಿಸುತ್ತಿದೆ, ಇದು ಭಾರತದ

ನಾವೀನ್ಯತೆ-ನೇತೃತ್ವದ ಬೆಳವಣಿಗೆಯನ್ನು ರೂಪಿಸುವ ಮತ್ತು ವಿಕಸಿತ ಭಾರತ ೨೦೪೭ ರ ದೃಷ್ಟಿಕೋನವನ್ನು ಮುಂದಕ್ಕೆ ಸಾಗಿಸುವ ಅತ್ಯಾಧುನಿಕ ಬೆಳವಣಿಗೆಗಳನ್ನು ಪ್ರದರ್ಶಿಸುತ್ತದೆ.

><><><><

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಕೊಟ್ಟಾಯಂನಿಂದ ಕೊಚ್ಚಿಗೆ ಪ್ರಯಾಣ ಬೆಳೆಸಲಿದ್ದು, ಎರ್ನಾಕುಲಂನ ಸೇಂಟ್ ಥೆರೆಸಾಸ್ ಕಾಲೇಜಿನ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಕೇರಳದ ಸಾಹಿತ್ಯ ನಗರಿ ಕೊಟ್ಟಾಯಂನಿಂದ ಕುಮಾರಕೋಮ್‌ಗೆ ರಾಷ್ಟ್ರಪತಿಯವರ ಪಂiiಣದ ಸಮಯದಲ್ಲಿ ಅವರನ್ನು ಸ್ವಾಗತಿಸಲು ನಿನ್ನೆ ರಸ್ತೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರಿದ್ದರು. ಪಾಲದ ಸೇಂಟ್ ಥಾಮಸ್ ಕಾಲೇಜಿನ ವಾರ್ಷಿಕೋತ್ಸವ ಆಚರಣೆಗಳನ್ನು ಉದ್ಘಾಟಿಸಿದ ಅವರು, ಶಿಕ್ಷಣ ಕ್ಷೇತ್ರಕ್ಕೆ ಕೊಟ್ಟಾಯಂ ನೀಡಿದ ಅತ್ಯುತ್ತಮ ಕೊಡುಗೆಗಳಿಗಾಗಿ ಶ್ಲಾಘನೆ ವ್ಯಕ್ತಪಡಿಸಿದರು.

><><><><

ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್, ನವದೆಹಲಿಯ ರೈಲ್ವೆ ಭವನದಲ್ಲಿ ನಿನ್ನೆ ವಾರ್‌ರೂಂಗೆ ಭೇಟಿ ನೀಡಿ, ಹಬ್ಬದ ಸಂದರ್ಭದಲ್ಲಿ ಸಂಚರಿಸುತ್ತಿರುವ ವಿಶೇಷ ರೈಲುಗಳ ಓಡಾಟ ಹಾಗೂ ಪ್ರಯಾಣಿಕರ ಅನುಕೂಲತೆಗಳನ್ನು ಪರಿಶೀಲಿಸಿದರು. ಛತ್ ಪೂಜೆ ಸಂದರ್ಭದಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ರೈಲ್ವೆ ಇಲಾಖೆ ಮಾಡಿಕೊಂಡಿರುವ ಸಿದ್ಧತೆಗಳನ್ನು ಪರಾಮರ್ಶಿಸಿದರು. ಬಳಿಕ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಭಾಗೀಯ ಮಟ್ಟ, ವಲಯಮಟ್ಟ ಹಾಗೂ ರೈಲ್ವೆ ಮಂಡಳಿ ಮಟ್ಟ - ಹೀಗೆ ಮೂರು ಹಂತಗಳಲ್ಲಿ ವಾರ್‌ರೂಂಗಳ ಮೂಲಕ ಸುರಕ್ಷಿತ ಸಂಚಾರ ವ್ಯವಸ್ಥೆಯನ್ನು

ಸಮನ್ವಯಗೊಳಿಸಲಾಗುತ್ತಿದೆ. ಇದಲ್ಲದೇ ಪ್ರತಿ ಪ್ರಮುಖ ರೈಲ್ವೆ ನಿಲ್ದಾಣಗಳಲ್ಲಿ ಹೆಚ್ಚುವರಿಯಾಗಿ ಒಂದು ಕಿರು ನಿಯಂತ್ರಣ ಕೊಠಡಿ ಸ್ಥಾಪಿಸಲಾಗಿದೆ ಎಂದರು.

ಧ್ವನಿ : ಅಶ್ವಿನಿ ವೈಷ್ಣವ್ - ೨೬ ಸೆಕೆಂಡ್ಸ್

ಮುಂದಿನ ೪ ದಿನಗಳಲ್ಲಿ ನಿಗದಿತ ರೈಲುಗಳಲ್ಲದೇ ಒಟ್ಟು ೧ ಸಾವಿರದ ೫೦೦ ವಿಶೇಷ ರೈಲುಗಳು ಸಂಚರಿಸಲಿವೆ.

><><><><

ಎರಡನೇ ಮತ್ತು ಅಂತಿಮ ಹಂತದ ಬಿಹಾರ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ೨೦ ಜಿಲ್ಲೆಗಳಾದ್ಯಂತ ೧೨೨ ಕ್ಷೇತ್ರಗಳಿಗೆ ಒಟ್ಟು ೧ ಸಾವಿರದ ೩೦೨ ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ.  ನಿನ್ನೆ ನಾಮಪತ್ರಗಳನ್ನು ಹಿಂಪಡೆಯಲು ಕೊನೆಯ ದಿನವಾಗಿತ್ತು ಮತ್ತು ೭೦ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂತೆಗೆದುಕೊಂಡರು.  ೧ ಸಾವಿರದ ೭೬೧ ನಾಮಪತ್ರಗಳು ಸಲ್ಲಿಕೆಯಾಗಿದ್ದು, ಅವುಗಳಲ್ಲಿ ೧ ಸಾವಿರದ ೩೭೨ ನಾಮಪತ್ರಗಳು ಪರಿಶೀಲನೆಯ ನಂತರ ಮಾನ್ಯವಾಗಿವೆ. ನವೆಂಬರ್ ೧೧ ರಂದು ಮತದಾನ ನಡೆಯಲಿರುವ ಎರಡನೇ ಹಂತಕ್ಕೆ ಪರಿಶೀಲನೆಯ ಸಮಯದಲ್ಲಿ ೩೮೯ ನಾಮಪತ್ರಗಳನ್ನು ತಿರಸ್ಕರಿಸಲಾಯಿತು.

><><><><

ಭಾರತ ಮತ್ತು ಅಮೆರಿಕ ತಮ್ಮ ವ್ಯಾಪಾರ ಮಾತುಕತೆಗಳಲ್ಲಿ ಸ್ಥಿರ ಪ್ರಗತಿಯನ್ನು ಸಾಧಿಸುತ್ತಿವೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ದೂರದರ್ಶನದೊಂದಿಗಿನ ನಡೆಸಿದ ಸಂವಾದದಲ್ಲಿ ಅವರು, ಉಭಯ ರಾಷ್ಟ್ರಗಳು ಮಾತುಕತೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿವೆ, ಭಾರತ ಮತ್ತು ಅಮೆರಿಕದ ತಂಡಗಳು ಚರ್ಚೆಗಳನ್ನು

ಮುಂದುವರೆಸಲು ನಿಕಟವಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು. ವಾಣಿಜ್ಯ ಕಾರ್ಯದರ್ಶಿ ಇತ್ತೀಚೆಗೆ ಅಮೆರಿಕಕ್ಕೆ ಭೇಟಿ ನೀಡಿ ನ್ಯಾಯಯುತ ಮತ್ತು ಸಮಾನ ವ್ಯಾಪಾರ ಒಪ್ಪಂದದತ್ತ ಮಾತುಕತೆಗಳನ್ನು ಮುಂದುವರಿಸಲು ತಮ್ಮ ಸಹವರ್ತಿಗಳನ್ನು ಭೇಟಿ ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ಎರಡೂ ದೇಶಗಳು ಅಂತಹ ಒಪ್ಪಂದವನ್ನು ತಲುಪಬಹುದು ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದ ಮತ್ತು ಇತರ ವ್ಯಾಪಾರ-ಸಂಬಂಧಿತ ವಿಷಯಗಳ ಕುರಿತು ಚರ್ಚೆ ನಡೆಸಲು ಕೇಂದ್ರ ಸಚಿವರು ಪ್ರಸ್ತುತ ಜರ್ಮನಿಯಲ್ಲಿದ್ದಾರೆ.

><><><><

ಮತಪಟ್ಟಿಗಳ ವಿಶೇಷ ತ್ವರಿತ ಪರಿಷ್ಕರಣೆಯ ಸಿದ್ಧತೆಗಳನ್ನು ಅಂತಿಮಗೊಳಿಸುವಂತೆ ಕೇಂದ್ರ ಚುನಾವಣಾ ಆಯೋಗ ಎಲ್ಲ ರಾಜ್ಯಗಳ ಮುಖ್ಯ ಚುನಾವಣಾ ಅಧಿಕಾರಿಗಳಿಗೆ ಸೂಚಿಸಿದೆ.

ದೆಹಲಿಯಲ್ಲಿ ನಿನ್ನೆ ಮುಕ್ತಾಯಗೊಂಡ ಮುಖ್ಯ ಚುನಾವಣಾ ಅಧಿಕಾರಿಗಳ ಅಧಿವೇಶನದಲ್ಲಿ ಈ ಬಗ್ಗೆ ಸೂಚಿಸಲಾಗಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಈ ಅಧಿವೇಶನದಲ್ಲಿ ಚುನಾವಣಾ ಆಯುಕ್ತರುಗಳಾದ ಡಾ. ಸುಖ್‌ಬೀರ್ ಸಿಂಗ್ ಸಾಂದು ಮತ್ತು ಡಾ. ವಿವೇಕ್ ಜೋಶಿ ಉಪಸ್ಥಿತರಿದ್ದರು.

><><><><

ನವಿ ಮುಂಬೈನ ಡಿವೈ ಪಾಟೀಲ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡವನ್ನು ೫೩ ರನ್‌ಗಳಿಂದ ಸೋಲಿಸುವ ಮೂಲಕ ಭಾರತ ಸೆಮಿಫೈನಲ್‌ಗೆ ಲಗ್ಗೆಯಿಟ್ಟಿತು. ಮೊದಲು ಬ್ಯಾಟಿಂಗ್ ಮಾಡಿದ ಭಾರತದ ಆರಂಭಿಕ ಆಟಗಾರ್ತಿಯರಾದ ಪ್ರತೀಕಾ ರಾವಲ್ ಮತ್ತು ಸ್ಮೃತಿ ಮಂಧಾನ ಅವರ ಅದ್ಭುತ ಶತಕಗಳ

ನೆರವಿನಿಂದ ಭಾರತ ೪೯ ಓವರ್‌ಗಳಲ್ಲಿ ೩ ವಿಕೆಟ್‌ಗೆ ೩೪೦ ರನ್‌ಗಳ ಬೃಹತ್ ಮೊತ್ತ ಪೇರಿಸಿತು. ಮಂಧಾನ ೧೦೯ ರನ್ ಗಳಿಸಿದರೆ, ರಾವಲ್ ೧೨೨ ರನ್ ಗಳಿಸಿದರು, ೪೪ ಓವರ್‌ಗಳಲ್ಲಿ ೩೨೫ ರನ್‌ಗಳ ಪರಿಷ್ಕೃತ ಡಿಎಲ್‌ಎಸ್ ಗುರಿಯನ್ನು ಬೆನ್ನಟ್ಟಿದ ನ್ಯೂಜಿಲೆಂಡ್ ನಿಗದಿತ ಓವರ್‌ಗಳಲ್ಲಿ ೮ ವಿಕೆಟ್‌ಗೆ ೨೭೧ ರನ್ ಗಳಿಸಿತು, ಈ ಗೆಲುವಿನೊಂದಿಗೆ, ಭಾರತವು ಈಗ ಮೂರು ಗೆಲುವುಗಳಿಂದ ಆರು ಅಂಕಗಳನ್ನು ಹೊಂದಿದೆ.

><><><><